**ಇಥಿಯೋಪಿಯಾದ ಅಡಿಸ್ ಅಬಾಬಾದ ಅಡ್ವಾ ವಿಜಯ ಸ್ಮಾರಕದಲ್ಲಿ ಪ್ರಧಾನಮಂತ್ರಿ ಗೌರವ ಸಮರ್ಪಣೆ**

ಡಿಸೆಂಬರ್ 17, 2025

ಪ್ರಧಾನಮಂತ್ರಿ ಶ್ರೀ ನರೇಂದ್ರ ಮೋದಿ ಅವರು ಇಂದು ಅಡಿಸ್ ಅಬಾಬಾದಲ್ಲಿರುವ ಅಡ್ವಾ ವಿಜಯ ಸ್ಮಾರಕಕ್ಕೆ ಪುಷ್ಪಗುಚ್ಛ ಇರಿಸಿ ಗೌರವ ಸಲ್ಲಿಸಿದರು. 1896 ರಲ್ಲಿ ಅಡ್ವಾ ಯುದ್ಧದಲ್ಲಿ ತಮ್ಮ ರಾಷ್ಟ್ರದ ಸಾರ್ವಭೌಮತ್ವಕ್ಕಾಗಿ ಪರಮೋಚ್ಚ ತ್ಯಾಗ ಮಾಡಿದ ಧೈರ್ಯಶಾಲಿ ಇಥಿಯೋಪಿಯನ್ ಸೈನಿಕರಿಗೆ ಈ ಸ್ಮಾರಕವನ್ನು ಸಮರ್ಪಿಸಲಾಗಿದೆ. ಈ ಸ್ಮಾರಕವು ಅಡ್ವಾ ವೀರರ ನಿರಂತರ ಚೈತನ್ಯ ಮತ್ತು ದೇಶದ ಹೆಮ್ಮೆಯ ಸ್ವಾತಂತ್ರ್ಯ, ಘನತೆ ಮತ್ತು ಸ್ಥಿತಿಸ್ಥಾಪಕತ್ವದ ಪರಂಪರೆಗೆ ಸಲ್ಲುವ ಗೌರವವಾಗಿದೆ.

2. ಸ್ಮಾರಕಕ್ಕೆ ಪ್ರಧಾನಮಂತ್ರಿಯವರ ಭೇಟಿಯು ಭಾರತ ಮತ್ತು ಇಥಿಯೋಪಿಯಾ ನಡುವಿನ ವಿಶೇಷ ಐತಿಹಾಸಿಕ ಸಂಬಂಧವನ್ನು ಒತ್ತಿ ಹೇಳುತ್ತದೆ, ಇದನ್ನು ಎರಡೂ ದೇಶಗಳ ಜನರು ಇಂದಿಗೂ ಮುಂದುವರೆಸಿಕೊಂಡು ಬಂದಿದ್ದಾರೆ.

ಅಡಿಸ್ ಅಬಾಬಾ

ಡಿಸೆಂಬರ್ 17, 2025